ನಿರ್ದೇಶಕರು
ಅಲ್ಪಸಂಖ್ಯಾತರ ನಿರ್ದೇಶನಾಲಯ
21ನೇ ಮಹಡಿ, ವಿ.ವಿಗೋಪುರ,
ಡಾ|| ಅಂಬೇಡ್ಕರ್ ವೀಧಿ, ಬೆಂಗಳೂರು
560001

ಕರ್ನಾಟಕ ಸರ್ಕಾರ

ದೂರವಾಣಿ:080- 22864212.
ಫ್ಯಾಕ್ಸ್: 080-22863618
Email:directorgokdom@gmail.com
Web: www.gokdom.kar.nic.in

**ಸಂಖ್ಯೆ:- ಅಸಂನಿ/ಅ/.ಸಕಾಲ_ಸುತ್ತೋಲೆ/ಸಿಆರ್-30/2021-22** **ದಿನಾಂಕ:23.11.2021**

# ಸುತ್ತೋಲೆ

ವಿಷಯ: ಅಲ್ಪಸಂಖ್ಯಾತರ ನಿರ್ದೇಶನಾಲಯದ ಸಕಾಲ ಸೇವೆಗಳನ್ನು ಆನ್‌ಲೈನ್ ತಂತ್ರಾಂಶದ **(ಸೇವಾ ಸಿಂಧು)** ಮೂಲಕ ನೀಡುವ ಕುರಿತು.

ಉಲ್ಲೇಖ: ಸರ್ಕಾರದ ಆದೇಶ ಸಂಖ್ಯೆ:MWD 273 MDS 2020 ದಿನಾಂಕ:24.07.2020

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಅಲ್ಪಸಂಖ್ಯಾತರ ನಿರ್ದೇಶನಾಲಯದ ವ್ಯಾಪ್ತಿಯಲ್ಲಿರುವ ಸುಮಾರು 6 ನಾಗರೀಕ ಸೇವೆಗಳನ್ನು ಕರ್ನಾಟಕ ಸಕಾಲ ಸೇವೆಗಳ ಅಧಿನಿಯಮ 2011 ಮತ್ತು (ತಿದ್ದುಪಡಿ) ಅಧಿನಿಯಮ 2014ರನ್ವಯ ಗುರುತಿಸಲಾಗಿರುತ್ತದೆ.

ಉಲ್ಲೇಖಿತ ಸರ್ಕಾರಿ ಆದೇಶದಲ್ಲಿ ಕರ್ನಾಟಕ ಸರ್ಕಾರದ ಮಹತ್ವಾಕಾಂಕ್ಷೆಯ ಸಕಾಲ ಯೋಜನೆಯಲ್ಲಿ ಅಧಿಸೂಚಿಸಲಾಗಿರುವ ಸೇವೆಗಳನ್ನು ಮತ್ತಷ್ಟು ನಾಗರೀಕ ಸ್ನೇಹಿಯನ್ನಾಗಿಸಲು, ವಿಲೇವಾರಿ ಮಾಡುವ ವ್ಯವಸ್ಥೆಯ ಕಾರ್ಯ ಹರಿವಿನ ಎಲ್ಲಾ ಹಂತಗಳಲ್ಲಿ ಕಡ್ಡಾಯವಾಗಿ ಆನ್‌ಲೈನ್ ತಂತ್ರಾಂಶವನ್ನು ಉಪಯೋಗಿಸಲು ಉದ್ದೇಶಿಸಿದೆ. ಸದರಿ ಕಾರ್ಯಕ್ರಮವು ನಾಗರೀಕರಿಂದ ನೇರವಾಗಿ ಸ್ವೀಕರಿಸುವ ಆನ್‌ಲೈನ್ ಅರ್ಜಿಗಳಿಗೆ ಹಾಗೂ ನಾಗರೀಕ ಸೇವಾ ಕೇಂದ್ರಗಳ ಮೂಲಕ ಸಲ್ಲಿಸುವ ಅರ್ಜಿಗಳಿಗೂ ಸಹ ಕಡ್ಡಾಯವಾಗಿ ಅನ್ವಯಿಸುತ್ತದೆ. ಇದರಿಂದ ನಾಗರೀಕರಿಗೆ ಅತ್ಯಂತ ಸುಲಲಿತವಾಗಿ, ಸರಳವಾಗಿ ಸೇವೆಗಳನ್ನು ನೀಡಿದಂತಾಗುತ್ತದೆ.

ಸೇವಾ ಸಿಂಧು ಯೋಜನೆಯಡಿ ಅಲ್ಪಸಂಖ್ಯಾತರ ನಿರ್ದೇಶನಾಲಯದ ವ್ಯಾಪ್ತಿಯಲ್ಲಿರುವ ಈ ಕೆಳಕಂಡ ಪಟ್ಟಿಯಲ್ಲಿರುವ 4 ಸಕಾಲ ಸೇವೆಗಳಿಗೆ ಆನ್‌ಲೈನ್ ತಂತ್ರಾಂಶವನ್ನು ಅಳವಡಿಸಲಾಗಿರುತ್ತದೆ. ಸದರಿ ಆನ್‌ಲೈನ್ ತಂತ್ರಾಂಶದ ಬಳಕೆಯನ್ನು ಕಡ್ಡಾಯ ಮಾಡುವುದರಿಂದ ಸಕಾಲ ಅಧಿನಿಯಮದ ದತ್ತಾಂಶವನ್ನು ಬೈಪಾಸ್ ಮಾಡುವುದನ್ನು ತಡೆಗಟ್ಟಬಹುದು. ಈ ಹಿನ್ನಲೆಯಲ್ಲಿ ಭೌತಿಕವಾಗಿ ಅರ್ಜಿಗಳನ್ನು ಸ್ವೀಕರಿಸುವುದನ್ನು ನಿಲ್ಲಿಸಿ, ಈಗಾಗಲೇ ಅಭಿವೃದ್ಧಿ ಪಡಿಸಲಾಗಿರುವ ಆನ್‌ಲೈನ್ ತಂತ್ರಾಂಶವಾದ **ಸೇವಾ ಸಿಂಧು**ವನ್ನು ಬಳಸಿಕೊಂಡು ಸೇವೆಗಳನ್ನು ಒದಗಿಸುವುದನ್ನು ಕಡ್ಡಾಯಗೊಳಿಸಿ ಆದೇಶಿಸಲಾಗಿರುತ್ತದೆ.

| Sl.No | Department | Services |
|---|---|---|
| 1 | Directorate of Minorities | Online application for Admission for the Morarji Desai Residential Schools |
| 2 | | Online application for Admission for the Minority Pre and Post Matric Hostels |
| 3 | | Online Application for Pre-examination training for Competitive Examinations for minority students |
| 4 | | Online Application for Vidyasiri |

ಪು.ತಿ.ನೋ

ಆದ್ದರಿಂದ ಅಲ್ಪಸಂಖ್ಯಾತರ ನಿರ್ದೇಶನಾಲಯದ ವ್ಯಾಪ್ತಿಯ ಈ ಮೇಲ್ಕಂಡ 4 ಸಕಾಲ ಸೇವೆಗಳನ್ನು ಈಗಾಗಲೇ ಅಭಿವೃದ್ಧಿ ಪಡಿಸಲಾಗಿರುವ ಆನ್‌ಲೈನ್ ತಂತ್ರಾಂಶವನ್ನು(**ಸೇವಾ ಸಿಂಧು**)ಬಳಸಿಕೊಂಡು ಸಾರ್ವಜನಿಕರು/ಫಲಾನುಭವಿಗಳಿಗೆ ಅಗತ್ಯ ಸೇವೆಗಳನ್ನು ಒದಗಿಸುವುದನ್ನು ಕಡ್ಡಾಯಗೊಳಿಸಲಾಗಿದೆ ಹಾಗೂ ಭೌತಿಕ ಅರ್ಜಿಗಳನ್ನು ಸ್ವೀಕರಿಸುವುದನ್ನು ಈ ಕೂಡಲೇ ನಿಲ್ಲಿಸಲಾಗಿದೆ. ಆದ್ದರಿಂದ ಸಂಬಂಧಪಟ್ಟ ಅಧಿಕಾರಿಗಳು/ಸಿಬ್ಬಂದಿಗಳು ಸಾರ್ವಜನಿಕರು/ಫಲಾನುಭವಿಗಳಿಗೆ ಸೂಕ್ತ ಮಾರ್ಗದರ್ಶನ ನೀಡಲು ಸೂಚಿಸಿದೆ. ತಪ್ಪಿದಲ್ಲಿ ಮುಂದಿನ ಆಗು-ಹೋಗುಗಳಿಗೆ ಸಂಬಂಧಪಟ್ಟ ಅಧಿಕಾರಿಗಳ ಮೇಲೆ ಸೂಕ್ತ ಶಿಸ್ತಿನ ಕ್ರಮ ಕೈಗೊಳ್ಳಲಾಗುವುದು. (Application ಗೆ ಸಂಬಂಧಿಸಿದ Username & Password ಗಳನ್ನು ಸಂಬಂಧಪಟ್ಟ ಜಿಲ್ಲಾ ಕಛೇರಿಯ ಇ-ಮೇಲ್‌ಗೆ ಕಳುಹಿಸಿಕೊಡಲಾಗಿರುತ್ತದೆ).

ನಿರ್ದೇಶಕರು, 23/11/21
ಅಲ್ಪಸಂಖ್ಯಾತರ ನಿರ್ದೇಶನಾಲಯ,
ಬೆಂಗಳೂರು.

<u>ಪ್ರತಿಯನ್ನು ಮಾಹಿತಿಗಾಗಿ ಗೌರವಪೂರ್ವಕವಾಗಿ ಸಲ್ಲಿಸಿದೆ:-</u>

1. ಸರ್ಕಾರದ ಕಾರ್ಯದರ್ಶಿಗಳು, ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಇಲಾಖೆ, ವಿಕಾಸ ಸೌಧ ಬೆಂಗಳೂರು.
2. ಎಲ್ಲಾ ಜಿಲ್ಲೆಗಳ ಜಿಲ್ಲಾಧಿಕಾರಿಗಳು ರವರಿಗೆ.
3. ಎಲ್ಲಾ ಜಿಲ್ಲೆಗಳ ಜಿಲ್ಲಾ ಪಂಚಾಯಿತ್‌ನ ಮುಖ್ಯ ಕಾರ್ಯನಿರ್ವಣಾಧಿಕಾರಿಗಳು ರವರಿಗೆ.

<u>ಪ್ರತಿಯನ್ನು ಸೂಕ್ತ ಕ್ರಮಕ್ಕಾಗಿ:-</u>

1. ರಾಜ್ಯದ ಎಲ್ಲಾ ಜಿಲ್ಲಾ ಅಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ.
2. ರಾಜ್ಯದ ಎಲ್ಲಾ ಪ್ರಾಂಶುಪಾಲರು, ಅಲ್ಪಸಂಖ್ಯಾತರ ವಸತಿ ಶಾಲೆ/ಕಾಲೇಜುಗಳು(ಜಿಲ್ಲಾ ಅಧಿಕಾರಿಗಳ ಮುಖಾಂತರ).
3. ರಾಜ್ಯದ ಎಲ್ಲಾ ತಾಲ್ಲೂಕು ವಿಸ್ತರಣಾಧಿಕಾರಿಗಳು, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ(ಜಿಲ್ಲಾ ಅಧಿಕಾರಿಗಳ ಮುಖಾಂತರ).
4. ರಾಜ್ಯದ ಎಲ್ಲಾ ಅಲ್ಪಸಂಖ್ಯಾತರ ವಿದ್ಯಾರ್ಥಿನಿಲಯಗಳ ಮೇಲ್ವಿಚಾರಕರು/ವಾರ್ಡನ್‌ಗಳು(ಜಿಲ್ಲಾ ಅಧಿಕಾರಿಗಳ ಮುಖಾಂತರ).
5. ಕಛೇರಿ/ಹೆಚ್ಚುವರಿ ಪ್ರತಿ.